# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 539
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 20.08.2026
4. ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ನಗರದಲ್ಲಿ ಇತ್ತೀಚೆಗೆ ಸಿಸಿಬಿ ಪೊಲೀಸರು ಪ್ರತ್ಯೇಕ ಪ್ರಕರಣಗಳಲ್ಲಿ ಸುಮಾರು 60 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ವಿದೇಶಿ ಪ್ರಜೆಗಳು ಅಕ್ರಮವಾಗಿ ಮಾದಕ ವಸ್ತುಗಳ ಮಾರಾಟದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಬೆಂಗಳೂರು ನಗರದಾದ್ಯಂತ ನಿಷೇಧಿತ ಮಾದಕ ವಸ್ತುಗಳ ಅಕ್ರಮ ಮಾರಾಟದಲ್ಲಿ ತೊಡಗಿರುವ ವಿದೇಶಿ ಪ್ರಜೆಗಳ ವಿರುದ್ಧ ಇದುವರೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ನಿಷೇಧಿತ ಮಾದಕ ವಸ್ತುಗಳ ಅಕ್ರಮ ಮಾರಾಟದಲ್ಲಿ ತೊಡಗಿರುವ ವಿದೇಶಿ ಪ್ರಜೆಗಳು ಕಂಡು ಬಂದಲ್ಲಿ ಕೂಡಲೇ ಅಂತಹವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ. |
| (ಇ) | ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಅಕ್ರಮ ಮಾರಾಟವನ್ನು ಶಾಶ್ವತವಾಗಿ ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು; | ಬೆಂಗಳೂರು ನಗರದಾದ್ಯಂತ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟವನ್ನು ಶಾಶ್ವತವಾಗಿ ತಡೆಗಟ್ಟಲು ಈ ಕೆಳಕಂಡ ಕಠಿಣ ಕ್ರಮಗಳನ್ನುಅನುಸರಿಸಲಾಗುತ್ತಿದೆ:-<br>• ಮಾದಕ ವಸ್ತುಗಳ ಮಾರಾಟ, ಸಾಗಾಣಿಕೆ, ಮತ್ತು ಸೇವನೆಯನ್ನು ತಡೆಗಟ್ಟಲು ಹಾಗೂ ಈ ಸಾಮಾಜಿಕ ಪಿಡುಗನ್ನು ಬುಡಸಮೇತ ಕಿತ್ತೊಗೆಯಲು ಕರ್ನಾಟಕ ಸರ್ಕಾರವು GO No. HD/141/POP/2024 ದಿನಾಂಕ: 02.08.2025 ಮತ್ತು ಡಿಜಿ & ಐಜಿಪಿ ಕಛೇರಿಯ SO No. 1051 ದಿನಾಂಕ 07.11.2025 ರನ್ವಯ ANTF (Anti Narcotic Task Force) ನ್ನು ಸ್ಥಾಪಿಸಿದೆ. ಗುಪ್ತಚರ ಆಧಾರದ ಮೇಲೆ ತನಿಖೆ ನಡೆಸುವುದು, ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವುದು ಹಾಗೂ ಮಾದಕ ವಸ್ತುಗಳ ಕಳ್ಳ ಸಾಗಾಣಿಕೆಯ ಜಾಲವನ್ನು ಭೇಧಿಸುವ ಗುರಿಯನ್ನು ಈ ಕಾರ್ಯಪಡೆ ಹೊಂದಿದೆ.<br>• ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಭಾಗಿಯಾದ ಅಥವಾ ರೂಢಿಗತ ಎನ್.ಡಿ.ಪಿ.ಎಸ್ |

ಆರೋಪಿತರಿಗೆ PIT-NDPS ಕಾಯ್ದೆ-1988ರಅಡಿಯಲ್ಲಿ ಕ್ರಮಜರುಗಿಸಲಾಗಿದೆ. ಬೆಂಗಳೂರು ನಗರದಲ್ಲಿ ಈವರೆಗೂ 21 ರೂಢಿಗತ ಎನ್.ಡಿ.ಪಿ.ಎಸ್ ಆರೋಪಿತರ ಮೇಲೆ PIT-NDPS ಕಾಯ್ದೆ-1988ರಡಿಯಲ್ಲಿ ಕ್ರಮ ಜರುಗಿಸಿ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

- ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಆರೋಪಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಿ ಎನ್.ಡಿ.ಪಿ.ಎಸ್ ಕಾಯ್ದೆ-1985 Chapter VA ಕಲಂ 68 (ಇ) & (ಎಫ್) ನಲ್ಲಿನ ಅಧಿಕಾರವನ್ನು ಚಲಾಯಿಸಿ ಸದರಿಯವರ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಕ್ರಮವಹಿಸಲಾಗುತ್ತಿದೆ. ಇಲ್ಲಿಯವರೆವಿಗೂ 5 ಜನ ಡ್ರಗ್ಸ್ ಪೆಡ್ಲರ್ ಗಳ ಸ್ಥಿರಾಸ್ತಿ/ಚರಾಸ್ತಿ ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.
- ಸಾರ್ವಜನಿಕರು ಡ್ರಗ್ಸ್ ಬಗ್ಗೆ ಮಾಹಿತಿ ನೀಡಲು ಡ್ರಗ್ ಫ್ರೀ ಕರ್ನಾಟಕ ಎಂಬ ಆಪ್ ಮಾಡಲಾಗಿದೆ. ಇದರಲ್ಲಿ ಡ್ರಗ್ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರು ಮಾಹಿತಿಯನ್ನು ನೀಡಬಹುದು ಮತ್ತು 1908 (ಟೋಲ್ ಫ್ರೀ ಸಂಖ್ಯೆ) ಅಥವಾ 1933 (MANAS Helpline) ಸಹಾಯ ವಾಣಿಗಳನ್ನು ಬಳಸಿ ಮಾಹಿತಿಯನ್ನು ತಿಳಿಸಲು ಅನುವು ಮಾಡಿಕೊಡಲಾಗಿದೆ.
- ಸಾರ್ವಜನಿಕರು ಮಾದಕ ವಸ್ತುಗಳ ಸಾಗಾಣಿ ಅಥವಾ ಮಾರಾಟ ಮಾಡುವವರ ಬಗ್ಗೆ "Drug Free Karnataka App" ನ್ನು ಬಳಸಿ (ರಕ್ಷಾ, ಕ್ಯೂ ಆರ್ ಕೋಡ್) ಅದರ ಮೂಲಕ ಗೌಪ್ಯವಾಗಿ ಸ್ಥಳೀಯ ಪೊಲೀಸರಿಗೆ ಮಾದಕ ವಸ್ತುಗಳ ಕಳ್ಳಸಾಗಾಣಿಕೆ, ಸೇವನೆ, ಸಂಗ್ರಹಣೆ, ಸಾಗುವಳಿ, ತಯಾರಕಾ ಘಟಕಗಳ ಮಾಹಿತಿಯನ್ನು ನೀಡುವಂತಹ ಸೇವೆಯನ್ನು ಆರಂಭಿಸಲಾಗಿದೆ.
- ಹೊರ ರಾಜ್ಯಗಳಿಂದ ಹಾಗೂ ವಿದೇಶದಿಂದ ಬೆಂಗಳೂರು ನಗರಕ್ಕೆ ಮಾದಕ ವಸ್ತುಗಳು ಸರಬರಾಜು ಆಗುವ ಸೂಕ್ಷ್ಮ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು, ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. ಜೊತೆಗೆ ಗಡಿ ಪ್ರದೇಶಗಳಲ್ಲಿ ಅತ್ಯಾಧುನಿಕ ಸ್ಕ್ಯಾನರ್‌ಗಳು ಮತ್ತು ಡ್ರೋನ್‌ಗಳ ಬಳಕೆ ಮಾಡಿ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟಲಾಗುತ್ತಿದೆ.
- ಅಂತರಾಷ್ಟ್ರೀಯ ಮಟ್ಟದಲ್ಲಿ ವಿದೇಶಗಳಿಂದ ಸರಬರಾಜಾಗುತ್ತಿರುವ ಮಾದಕ ವಸ್ತುಗಳ ಪತ್ತೆಸಲುವಾಗಿ ಅಂಚೆ ಕಛೇರಿ ಅಧಿಕಾರಿಗಳ ಸಹಭಾಗಿತ್ವದಲ್ಲಿ ವಿದೇಶಿಗಳಿಂದ ಬಂದಂತಹ

| | | |
|---|---|---|
| | | ಅನುಮಾನ ಕಂಡು ಬಂದ ಪಾರ್ಸಲ್‌ಗಳನ್ನು ನುರಿತ ಶ್ವಾನದಳ/ ಸೋಕೋ ತಂಡದಿಂದ ತಪಾಸಣೆ ನಡೆಸಿ, ಮಾದಕ ವಸ್ತುಗಳ ಪತ್ತೆಗೆ ಕ್ರಮವಹಿಸಲಾಗಿದೆ.<br>• Bitcoin ಬಳಸಿ ಡಾರ್ಕ್ ನೆಟ್ (Darknet) ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್ /ಕೊರಿಯರ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ. ತಂತ್ರಜ್ಞಾನವನ್ನು ಬಳಸಿ ಇಂತಹ ದಂಧೆಗಳನ್ನು ಶೀಘ್ರವಾಗಿ ಪತ್ತೆ ಹಚ್ಚಲು ಪೊಲೀಸ್ ಇಲಾಖೆಯನ್ನು ಬಲಪಡಿಸಲಾಗಿದೆ.<br>• ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, Medical and Mental Health Department, CCB, BBMP, Social Welfare, Revenue, Commercial Tax, FRRO, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು (NCORD Meeting) ನಡೆಸಲಾಗಿದೆ. ಇಲ್ಲಿಯವರೆವಿಗೂ ಇಂತಹ 19 ಸಭೆಗಳನ್ನು ನಡೆಸಿ ಎಲ್ಲಾ ಇಲಾಖೆಗಳೊಂದಿಗೂ ಸಮನ್ವಯದಿಂದ ಕಾರ್ಯನಿರ್ವಹಿಸಲಾಗುತ್ತಿದೆ.<br>• ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ದಂಧೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಹಾಗೂ ಎಲ್ಲರೊಂದಿಗೂ ಸಮನ್ವಯ ಸಾಧಿಸಲು ಮಾನ್ಯ ಪೊಲೀಸ್ ಆಯುಕ್ತರ ಕಛೇರಿ ಜ್ಞಾಪನ ಪತ್ರ ಸಂಖ್ಯೆ. 198/ಅಪರಾಧ-7/ಮಿತ್ರ/ಸಿಓಪಿ/2025 ದಿನಾಂಕ: 15.12.2025 ರನ್ವಯ ಮಾದಕ ದ್ರವ್ಯ ವಿರೋಧಿ ಕಾರ್ಯಪಡೆಯನ್ನು ಉಪಪೊಲೀಸ್ ಆಯುಕ್ತರು ಅಪರಾಧ-2 ರವರ ಅಧ್ಯಕ್ಷತೆಯಲ್ಲಿ ನೇಮಕ ಮಾಡಲಾಗಿದೆ. ಈ ಕಾರ್ಯಪಡೆಗೆ ಎಲ್ಲಾ ವಿಭಾಗದಿಂದ ಒಬ್ಬ ಸಹಾಯಕ ಪೊಲೀಸ್ ಆಯುಕ್ತರು (ACP) ದರ್ಜೆಯ ಅಧಿಕಾರಿಗಳು ಸದಸ್ಯರಾಗಿದ್ದಾರೆ.<br>• ಶಾಲಾ-ಕಾಲೇಜುಗಳಲ್ಲಿ ಮಾದಕ ವಸ್ತುಗಳ ಮಾರಾಟ, ಸಾಗಾಣಿಕೆ ಮತ್ತು ಸೇವನೆಯನ್ನು ತಡೆಗಟ್ಟಲು ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪೋಷಕರನ್ನೊಳಗೊಂಡಂತೆ Anti Drug Committee ಯನ್ನು ರಚಿಸಲಾಗಿದೆ.<br>• ಮಾದಕ ವಸ್ತುಗಳನ್ನು ಬೆಳೆಯುವ ಪ್ರದೇಶ ಮತ್ತು ಸಿಂಥೆಟಿಕ್ ಡ್ರಗ್ಸ್ ಗಳನ್ನು ತಯಾರಿಸುವ ಲ್ಯಾಬ್‌ಗಳ ಹಾಗೂ ಸಂಗ್ರಹಿಸಿಟ್ಟಿದ್ದ |

| | | |
|---|---|---|
| | | ಸಂಗ್ರಹಗಾರಗಳ ಮೇಲೆ ದಾಳಿ ಮಾಡಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಡ್ರಗ್ಸ್‌ಗಳ ತಯಾರಿಕಾ ರಾಸಾಯನಿಕಗಳ ಪೂರೈಕೆಯ ಮೇಲೆ ಕಟ್ಟುನಿಟ್ಟಿನ ನಿಗಾ ಇಡಲಾಗುತ್ತಿದೆ.<br>• ಡ್ರಗ್ ಕಂಟ್ರೋಲ್ ಬೋರ್ಡ್, ಸಿಸಿಬಿ ಎನ್‌ಬಿಡಬ್ಲ್ಯೂ ಘಟಕದ ಸಹಭಾಗಿತ್ವದಲ್ಲಿ ಜಂಟಿ ಕಾರ್ಯಾಚರಣೆ ನಡೆಸಿ ಮೆಡಿಕಲ್/ಡ್ರಗ್ಸ್ ಸೆಂಟರ್‌ಗಳ ಮೇಲೆ ದಾಳಿ ನಡೆಸಿ ತಪಾಸಣೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಪೋಷಕರು, ಶಿಕ್ಷಕರು ಮತ್ತು ಸ್ಥಳೀಯ ಸಂಘಟನೆಗಳನ್ನು ಒಳಗೊಂಡ 'ಮಾದಕ ದ್ರವ್ಯ ಮುಕ್ತ ಸಮುದಾಯ' ಅಭಿಯಾನಗಳನ್ನು ಚಾಲ್ತಿಗೆ ತರಲಾಗಿದೆ.<br>• ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳು ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್ ಪೋರ್ಟ್ ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.<br>• ನಗರದಲ್ಲಿ ಪ್ರತಿಷ್ಠಿತ ಹೋಟೆಲ್, ಪಬ್‌ಗಳಲ್ಲಿ ರಾತ್ರಿ ಪಾರ್ಟಿಗಳನ್ನು ನಡೆಸಿ ಅಲ್ಲಿಗೆ ಬರುತ್ತಿದ್ದ ಪ್ರತಿಷ್ಠಿತರಿಗೆ ಹಾಗೂ ಸೆಲೆಬ್ರಿಟಿಗಳಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ವ್ಯವಸ್ಥಿತ ಜಾಲವನ್ನು ಪತ್ತೆ ಮಾಡಿ ಅವರನ್ನು ದಸ್ತಗಿರಿ ಮಾಡಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.<br>• ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಎಲ್ಲಾ ಕಡೆ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ.<br>• ಬೆಂಗಳೂರು ನಗರ ಪೊಲೀಸರು ವಿದ್ಯಾ ಸಂಸ್ಥೆಗಳ ಬಳಿ ಮಾದಕ ವಸ್ತು ಪದಾರ್ಥಗಳ ಮಾರಾಟ / ಸೇವನೆ ಮಾಡುತ್ತಿದ್ದವರ ವಿರುದ್ಧ ನಿರಂತರ ವಿಶೇಷ ಕಾರ್ಯಾಚರಣೆ ನಡೆಸಿ ಮಾರಾಟ ಮಾಡುತ್ತಿದ್ದವರು ಮತ್ತು ಸೇವನೆ ಮಾಡಿದವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ.<br>• ಪೊಲೀಸ್ ಅಧಿಕಾರಿ/ ಸಿಬ್ಬಂದಿಗಳು ಶಾಲಾ-ಕಾಲೇಜುಗಳು/ ಪಿಜಿ /ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ |

| | | |
|---|---|---|
| | | ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ/ಅರಿವು ಕಾರ್ಯಕ್ರಮಗಳನ್ನು ಆಯೋಜಿಸಿ ಉಪನ್ಯಾಸ, ದೃಶ್ಯ ರೂಪಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಜೊತೆಗೆ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತಿದೆ.<br>• ಸಾರ್ವಜನಿಕ ಸ್ಥಳಗಳು, ಜನಸಂದಣಿ ಪ್ರದೇಶಗಳು ಹಾಗೂ ಪ್ರಮುಖ ವ್ಯಕ್ತಿಗಳು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆ ಮಾಡಿ, ಕರಪತ್ರ, ಬಿತ್ತಿ ಪತ್ರ ವಿತರಿಸಿ, ಪೋಸ್ಟರ್ ಗಳನ್ನು ಜನಸಂದಣಿ ಇರುವ ಕಡೆ ಪ್ರದರ್ಶಿಸಿ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>• ದಿನಾಂಕ :30-06-2026 ರಂದು ಅಂತರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಸಾಗಾಣಿಕೆ ವಿರೋಧಿ ದಿನ-2026 ಅನ್ನು ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ "ಆಪರೇಷನ್ ರೈಸ್" (RISE) ಮತ್ತು "ಬೇಡಾ ಬ್ರೋ" ಉಪಕ್ರಮಗಳ ಮುಖೇನ ಪೊಲೀಸ್ ಇಲಾಖೆಯಿಂದ ಬಹಳ ಅರ್ಥಪೂರ್ಣವಾಗಿ ಆಚರಿಸಲಾಯಿತು. ಸದರಿ ಸಭೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ ಶಿವಕುಮಾರ್ ಹಾಗೂ ಮಾನ್ಯ ಗೃಹಮಂತ್ರಿಗಳಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಭಾಗವಹಿಸಿ ಮಾದಕ ವಸ್ತುಗಳ ವಿಷಯದಲ್ಲಿ ಸರ್ಕಾರವು ಶೂನ್ಯ ಸಹಿಷ್ಣುತೆ (Zero Tolerance) ನೀತಿಯನ್ನು ಅನುಸರಿಸುತ್ತಿದೆ ಎಂಬುದನ್ನು ಮನವರಿಕೆ ಮಾಡಿಕೊಟ್ಟು ಸಾರ್ವಜನಿಕರು, ವಿದ್ಯಾರ್ಥಿಗಳು ಮಾದಕ ವಸ್ತುಗಳ ದುಷ್ಚಟದಿಂದ ದೂರವಿರಲು ಕರೆ ನೀಡಿದರು. ಈ ಕಾರ್ಯಕ್ರಮವನ್ನು Zoom ಆಪ್ ಮೂಲಕ ಲೈವ್‌ನಲ್ಲಿ ಬೆಂಗಳೂರಿನ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವೀಕ್ಷಿಸಿ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.<br>• ಅಂತರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆಯ ಅಂಗವಾಗಿ ಬೆಂಗಳೂರು ನಗರದ ಪೊಲೀಸ್ ಅಧಿಕಾರಿ /ಸಿಬ್ಬಂದಿಗಳು ನಗರದಾದ್ಯಂತ ಮಾದಕ ವಸ್ತು ವಿರೋಧಿ ಜಾಥಾ/ಓಟ/ Rally ಯನ್ನು ಯಶಸ್ವಿಯಾಗಿ ಆಯೋಜಿಸಿ ಈ ಮೂಲಕ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ |

| | | |
|---|---|---|
| | | ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವಲ್ಲಿ ಯಶಸ್ವಿಯಾಗಿದ್ದಾರೆ. |
| (ಈ) | ಮಾದಕ ವಸ್ತುಗಳ ಸಾಗಾಣಿಕೆ ಮತ್ತು ಮಾರಾಟ ಮತ್ತು ಬಳಕೆ ತಡೆಯಲು ಸರ್ಕಾರ ಕಠಿಣ ಕ್ರಮಗಳನ್ನು ಜರುಗಿಸುವುದರ ಜೊತೆಗೆ ವಿದೇಶಗಳಿಂದ ಅಕ್ರಮವಾಗಿ ಸಾಗಾಣಿಕೆ ಮಾಡದಂತೆ ಈ ಕೂಡಲೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದೇ? | • ಮಾದಕ ವಸ್ತುಗಳ ಸಾಗಾಣಿಕೆ, ಮಾರಾಟ ಮತ್ತು ಬಳಕೆ ಮಾಡುತ್ತಿರುವುದು ಕಂಡು ಬಂದ ಕೂಡಲೇ ಅಂತಹವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕಠಿಣ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ.<br>• ಅಂತರಾಷ್ಟ್ರೀಯ ಮಟ್ಟದಲ್ಲಿ ವಿದೇಶಗಳಿಂದ ಸರಬರಾಜಾಗುತ್ತಿರುವ ಮಾದಕ ವಸ್ತುಗಳ ಪತ್ತೆ ಸಲುವಾಗಿ ಅಂಚೆ ಕಛೇರಿ ಅಧಿಕಾರಿಗಳ ಸಹಭಾಗಿತ್ವದಲ್ಲಿ ವಿದೇಶಗಳಿಂದ ಬಂದಂತಹ ಅನುಮಾನ ಕಂಡು ಬಂದ ಪಾರ್ಸಲ್‌ಗಳನ್ನು ನುರಿತ ಶ್ವಾನದಳ/ ಸೋಕೋ ತಂಡದಿಂದ ತಪಾಸಣೆ ನಡೆಸಿ, ಮಾದಕ ವಸ್ತುಗಳ ಪತ್ತೆಗೆ ಕ್ರಮವಹಿಸಲಾಗಿದೆ.<br>• ರೂಢಿಗತ 6 ಜನ ವಿದೇಶಿ ಡ್ರಗ್ಸ್ ಪೆಡ್ಲರ್‌ಗಳನ್ನು PIT NDPS ಕಾಯ್ದೆಯಡಿ ಬಂಧಿಸಿ 1 ವರ್ಷಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿರುತ್ತದೆ.<br>• ಡ್ರಗ್ಸ್ ದಂಧೆಯಲ್ಲಿ ತೊಡಗಿದ್ದ ಇಬ್ಬರು ವಿದೇಶಿ ಡ್ರಗ್ಸ್ ಪೆಡ್ಲರ್‌ಗಳ ಚರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.<br>• Bitcoin ಬಳಸಿ ಡಾರ್ಕ್ ನೇಟ್ Darknet ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಾಗಿರುತ್ತದೆ.<br>• ವಿದೇಶಗಳಿಂದ ಪೋಸ್ಟಲ್ /ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ. ತಂತ್ರಜ್ಞಾನವನ್ನು ಬಳಸಿ ಇಂತಹ ದಂಧೆಗಳನ್ನು ಶೀಘ್ರವಾಗಿ ಪತ್ತೆ ಹಚ್ಚಲು ಪೊಲೀಸ್ ಇಲಾಖೆಯನ್ನು ಬಲಪಡಿಸಲಾಗಿದೆ.<br>• ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳು ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್ ಪೋರ್ಟ್ ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.<br>• ವಿದೇಶಿ ವಿದ್ಯಾರ್ಥಿಗಳು ಕಾಲೇಜಿಗೆ ಪ್ರವೇಶ ಪಡೆದು ದಿನನಿತ್ಯ ಕಾಲೇಜಿಗೆ ಬರದಿರುವ |

| | | | |
|---|---|---|---|
| | | | ಹಾಗೂ ಕಾಲೇಜು ಬಿಟ್ಟು ಬೇರೆ ವ್ಯವಹಾರ ನಡೆಸುತ್ತಿರುವ ವಿದೇಶಿಯರ ಮೇಲೆ ಹದ್ದಿನಕಣ್ಣಿಟ್ಟು ಅವರ ಚಲನವಲನಗಳನ್ನು ಗಮನಿಸಲಾಗುತ್ತಿದೆ.<br>• ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವ ಮೂಲಕ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. |

**ಒಇ 86 ಪಿಎಸ್‌ಡಿ 2026**

(ಪ್ರಿಯಾಂಕ್ ಖರ್ಗೆ)
ಗ್ರಹ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಇ-ಆಡಳಿತ ಸಚಿವರು